**ಮುಖ್ಯ ನ್ಯಾಯಿಕ ದಂಡಾಧಿಕಾರಿಗಳ ನ್ಯಾಯಾಲಯ, ಹಾವೇರಿ.**

**ಸಿ.ಸಿ.ನಂ.36/2022**

| | | | |
|---|---|---|---|
| ಸಾಕ್ಷಿದಾರರ ಹೆಸರು | ಚನ್ನಬಸಪ್ಪ ರಾಗಿ | ಸಿಡಬ್ಲ್ಯೂ | 13 |
| ತಂದೆ ಹೆಸರು | ವೀರಪ್ಪ | ಪಿಡಬ್ಲ್ಯೂ | 6 |
| ವಯಸ್ಸು | 52 ವರ್ಷ | | |
| ಉದ್ಯೋಗ | ಕೃಷಿ | | |
| ವಾಸಸ್ಥಳ | ಹೊಸಮೇಲ್ಮುರಿ | | |

**ದಿಃ 29.07.2026 ರಂದು ಸಾಕ್ಷಿದಾರರಿಗೆ ಪ್ರಮಾಣ ವಚನ ಬೋಧಿಸಲಾಯಿತು.**

**ಮುಖ್ಯ ವಿಚಾರಣೆಃ ಹಿ.ಸ.ಸ.ಅಭಿಯೋಜಕರಿಂದ.**

1). ನನಗೆ ಚಾ.ಸಾ–1 ರಿಂದ 12 ಇವರ ಮತ್ತು ಮೃತ ವ್ಯಕ್ತಿಯ ಪರಿಚಯ ಇರುತ್ತದೆ. ಆರೋಪಿಯನ್ನು ಇದೇ ಮೊದಲ ಬಾರಿಗೆ ನ್ಯಾಯಾಲಯದಲ್ಲಿ ನೋಡುತ್ತಿದ್ದೇನೆ. ಈ ಪ್ರಕರಣಕ್ಕೆ ಸಂಬಂಧಿಸಿದಂತೆ ನನಗೆ ಯಾವುದೇ ಮಾಹಿತಿ ಇರುವದಿಲ್ಲ. ಪೊಲೀಸರ ಮುಂದೆ ಯಾವುದೇ ಹೇಳಿಕೆ ನೀಡಿರುವದಿಲ್ಲ.

2) ನನ್ನ ಸಹಿಗಳನ್ನು ನೋಡಿದರೆ ಗುರುತಿಸಬಲ್ಲೆ. ಸಾಕ್ಷಿಗೆ ನಿ.ಪಿ–4 ಮತ್ತು 5 ಸ್ಥಳ ಪಂಚನಾಮೆ ಮತ್ತು ಕಚ್ಚಾ ನಕಾಶೆ ತೋರಿಸಲಾಗಿ ಅದರಲ್ಲಿರುವ ಸಹಿಯನ್ನು ಸಾಕ್ಷಿಯು ಗುರುತಿಸಿದ್ದರಿಂದ, ನಿ.ಪಿ–4(ಡಿ) ಮತ್ತು ನಿ.ಪಿ–5(ಡಿ) ಎಂದು ಗುರುತಿಸಲಾಯಿತು. ಸದರಿ ದಾಖಲೆಗಳಿಗೆ ಎಲ್ಲಿ ಮತ್ತು ಯಾವಾಗ ಯಾವ ವಿಷಯಕ್ಕೆ ಸಂಬಂಧಿಸಿದಂತೆ ಯಾರ ಯಾರ ಸಮಕ್ಷಮ ಸಹಿ ಮಾಡಿದ್ದೇನೆ ಎಂದು ಹೇಳಲು ಆಗುವದಿಲ್ಲ. ನಿ.ಪಿ–6 ಮತ್ತು 7 ಫೋಟೋಗಳಲ್ಲಿ ನಾನು ಇರುತ್ತೇನೆ. ಅವುಗಳನ್ನು ಎಲ್ಲಿ ಮತ್ತು ಯಾವಾಗ ಮತ್ತು ಯಾವ ಕಾರಣಕ್ಕೆ ತೆಗೆಯಲಾಗಿದೆ ಎಂದು ಹೇಳಲು ಆಗುವದಿಲ್ಲ .

**(ಈ ಹಂತದಲ್ಲಿ ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿ ಎಂದು ಪರಿಗಣಿಸಿ ಪಾಟೀ ಸವಾಲು ಮಾಡಲು ಅನುಮತಿ ಕೋರಿದ್ದರಿಂದ, ಪರಿಶೀಲಿಸಿ ಅನುಮತಿ ನೀಡಲಾಯಿತು)**

**ಪಾಟೀ ಸವಾಲುಃ ಹಿ.ಸ.ಸ.ಅಭಿಯೋಜಕರಿಂದ.**

3) ದಿನಾಂಕಃ 30.04.2021 ರಂದು ಪೊಲೀಸರ ಮುಂದೆ ನೀಡಿದ ಹೇಳಿಕೆಯನ್ನು ಸಾಕ್ಷಿಗೆ ಓದಿ ಹೇಳಿ ಕೇಳಲಾಗಿ ಅದರಲ್ಲಿ ಬರೆದಿರುವಂತೆ ಆರೋಪಿಯು ತನ್ನ ಬಾಬ್ತು ಗೂಡ್ಸ ವಾಹನವನ್ನು ಸಾರ್ವಜನಿಕ ರಸ್ತೆಯಲ್ಲಿ ಅತೀ ವೇಗ ಮತ್ತು ಅಜಾಗರಕೂತೆಯಿಂದ ಚಾಲನೆ ಮಾಡಿಕೊಂಡು ಬಂದು ರಸ್ತೆಯಲ್ಲಿ ನಡೆದುಕೊಂಡು ಹೋಗುತ್ತಿದ್ದ ಮೃತ ವ್ಯಕ್ತಿಗೆ ಅಪಘಾತಪಡಿಸಿ ಅವಳ ಸಾವಿಗೆ ಕಾರಣನಾಗಿರುತ್ತಾನೆ ಅಂದರೆ ಸರಿಯಲ್ಲ. ಸದರಿ ಅಪಘಾತವನ್ನು ಪ್ರತ್ಯಕ್ಷವಾಗಿ ನಾನು ಮತ್ತು ಚಾ.ಸಾ-13 ರವರು ಗಾಯಾಳುವನ್ನು ಉಪಚರಿಸಿ ಆಸ್ಪತ್ರೆಗೆ ಕರೆದುಕೊಂಡು ಹೋಗಿರುತ್ತೇವೆ ಅಂದರೆ ಸರಿಯಲ್ಲ. ಸಾಕ್ಷಿ ಅಲ್ಲಗಳೆದ ಹೇಳಿಕೆಯನ್ನು ನಿ.ಪಿ-19 ಎಂದು ಗುರುತಿಸಲಾಯಿತು.

4) ದಿನಾಂಕಃ 29.04.2021 ರಂದು ಆದ ರಸ್ತೆ ಅಪಘಾತದ ವಿಚಾರಕ್ಕೆ ಸಂಬಂಧಿಸಿದಂತೆ ಪೊಲೀಸರು ಅಪಘಾತವಾದ ಸ್ಥಳಕ್ಕೆ ಬಂದಿದ್ದು, ನಾನು ತೋರಿಸಿದ ಸ್ಥಳದಲ್ಲಿ ಚಾ.ಸಾ-5 ಮತ್ತು 6 ರವರ ಸಮಕ್ಷಮ ನಿ.ಪಿ-4 ರಂತೆ ಸ್ಥಳ ಪಂಚನಾಮೆ ಜರುಗಿಸಿ, ನಿ.ಪಿ-5 ರಂತೆ ಕಚ್ಚಾ ನಕಾಶೆಯನ್ನು ತಯಾರಿಸಿ ಸ್ಥಳದಲ್ಲಿಯೇ ನಮ್ಮ ಸಹಿಗಳನ್ನು ಪಡೆದುಕೊಂಡಿದ್ದಾರೆ ಅಂದರೆ ಸರಿಯಲ್ಲ. ಆ ಸಮಯದಲ್ಲಿ ನಿ.ಪಿ-6 ಮತ್ತು 7 ಭಾವಚಿತ್ರಗಳನ್ನು ತೆಗೆಯಿಸಿರುತ್ತಾರೆ ಅಂದರೆ ಸರಿಯಲ್ಲ. ನನಗೆ ನಿ.ಪಿ-4 ರಿಂದ 7 ಮತ್ತು 19 ಹೇಳಿಕೆಯ ಬಗ್ಗೆ ನನಗೆ ಸಂಪೂರ್ಣ ಮಾಹಿತಿ ಇದ್ದರೂ ಸಹ ಆರೋಪಿಯನ್ನು ಈ ಪ್ರಕರಣದಿಂದ ಬಿಡುಗಡೆ ಮಾಡಿಸಲು ಸುಳ್ಳು ಸಾಕ್ಷಿ ಹೇಳುತ್ತಿದ್ದೇನೆ ಅಂದರೆ ಸರಿಯಲ್ಲ.

**ಪಾಟೀ ಸವಾಲುಃ ಆರೋಪಿ ಪರವಾಗಿ ಪಾಟೀ ಸವಾಲು ಇರುವದಿಲ್ಲ ಎಂದು ತಿಳಿಸಿರುತ್ತಾರೆ.**

**ಮರು ವಿಚಾರಣೆ ಇಲ್ಲಾ.**

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತ ಲೇಖನದ ಮೇರೆಗೆ ಬೆರಳಚ್ಚು ಮಾಡಲಾಯಿತು)

ನ. ಸ. ಓ. ಹೇ. ಕೇ. ಸರಿ ಇದೆ.
ಎಂದು ಒಪ್ಪಿರುತ್ತಾರೆ.

ಮುಖ್ಯ ನ್ಯಾಯಿಕ ದಂಡಾಧಿಕಾರಿಗಳು
ಹಾವೇರಿ.